ಶುಕ್ರವಾರ 30.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 130
Digital Varthe Kannada Daily
Volume 01 - Issue 130
Friday, 30.01.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ಪತಿ ಆತ್ಮಹತ್ಯೆಗೆ ಕಾರಣರಾದ ಪತ್ನಿ



**ದಾವಣಗೆರೆ:** ಮದುವೆಯಾಗಿ ಕೇವಲ ಎರಡು ತಿಂಗಳಲ್ಲೇ ಪತ್ನಿ ತನ್ನ ಪ್ರಿಯಕರನೊಂದಿಗೆ ಪರಾರಿಯಾದ ಘಟನೆ ದಾವಣಗೆರೆಯಲ್ಲಿ ಭಾರೀ ಸಂಚಲನ ಮೂಡಿಸಿದೆ. ಈ ಘಟನೆ ಕುಟುಂಬದೊಳಗಿನ ಕಲಹವನ್ನು ದುರ್ಘಟನೆಯ ಮಟ್ಟಕ್ಕೆ ತಳ್ಳಿದ್ದು, ಪತಿ ಆತ್ಮಹತ್ಯೆ ಮಾಡಿಕೊಂಡಿರುವ ದಾರುಣ ಸಂಗತಿ ಬೆಳಕಿಗೆ ಬಂದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪತ್ನಿ ಹಾಗೂ ಆಕೆಯ ಪ್ರಿಯಕರನನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

ಬಂಧಿತ ಮಹಿಳೆ ಮದುವೆಯಾದ ಕೆಲವೇ ದಿನಗಳಲ್ಲಿ ತನ್ನ ಪ್ರಿಯಕರ ಕುಮಾರ್‌ನೊಂದಿಗೆ ಮನೆ ಬಿಟ್ಟು ಪರಾರಿಯಾಗಿದ್ದಳು ಎನ್ನಲಾಗಿದೆ. ಪತ್ನಿಯ ಈ ನಿರ್ಧಾರದಿಂದ ತೀವ್ರ ಮನನೊಂದ ಪತಿ ಹರೀಶ್, ಡೆತ್‌ನೋಟ್ ಬರೆದಿಟ್ಟು ತನ್ನ ಜಮೀನಿನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದ. ಕುಟುಂಬದವರ ಹೇಳಿಕೆಯ ಪ್ರಕಾರ, ಈ ಘಟನೆ ಹರೀಶ್ ಕುಟುಂಬವನ್ನು ಸಂಪೂರ್ಣವಾಗಿ ಬೆಚ್ಚಿಬೀಳುವಂತೆ ಮಾಡಿತ್ತು.

ಇದಲ್ಲದೆ, ಈ ಮದುವೆಗೆ ಮುಂದೆ ನಿಂತು ಸಹಾಯ ಮಾಡಿದ್ದ ಮಹಿಳೆಯ ಸೋದರ ಮಾವ ರುದ್ರೇಶ್ ಕೂಡ ಮಾನಸಿಕವಾಗಿ ಕುಗ್ಗಿ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ. ಒಂದೇ ಕುಟುಂಬದಲ್ಲಿ ಅಲ್ಪ ಅವಧಿಯಲ್ಲಿ ಎರಡು ಆತ್ಮಹತ್ಯೆಗಳು ಸಂಭವಿಸಿರುವುದು ಗ್ರಾಮಸ್ಥರಲ್ಲಿ ಆಘಾತ ಮೂಡಿಸಿದೆ.

ಈ ಸಂಬಂಧ ದಾವಣಗೆರೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತಕ್ಷಣವೇ ತನಿಖೆ ಆರಂಭಿಸಿದ್ದರು. ಜ.28ರಂದು ಆರೋಪಿ ಮಹಿಳೆಯನ್ನು ಹುಲಿಕಟ್ಟೆ ಪ್ರದೇಶದ ಬಳಿ ಬಂಧಿಸಲಾಗಿತ್ತು. ಇಂದು (ಜ.29) ಆಕೆಯ ಪ್ರಿಯಕರ ಕುಮಾರ್‌ನನ್ನು ಹಳೇ ಕಡ್ಲೆಬಾಳು ಗ್ರಾಮದ ಸಮೀಪದಿಂದ ವಶಕ್ಕೆ ಪಡೆಯಲಾಗಿದೆ. ಇಬ್ಬರನ್ನೂ ಪೊಲೀಸ್ ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ.

ಪ್ರಾಥಮಿಕ ತನಿಖೆಯಲ್ಲಿ ಕುಟುಂಬ ಕಲಹ, ವೈಯಕ್ತಿಕ ಸಂಬಂಧಗಳ ಗೊಂದಲ ಹಾಗೂ ಆತ್ಮಹತ್ಯೆಗೆ ದಾರಿಯಾದ ಮಾನಸಿಕ ಒತ್ತಡಗಳ ಬಗ್ಗೆ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಪ್ರಕರಣದ ಹಿನ್ನೆಲೆ ಹಾಗೂ ಘಟನೆಗಳ ಸರಮಾಲೆ ಕುರಿತು ಹೆಚ್ಚಿನ ವಿವರಗಳನ್ನು ತಿಳಿಯಲು ಪೊಲೀಸರು ಮುಂದುವರಿದ ತನಿಖೆ ನಡೆಸುತ್ತಿದ್ದಾರೆ.

# ಕೊಳಚೆ ನೀರಲ್ಲಿ ಪ್ಲೇಟ್ ತೊಳೆದ ಶಾಲಾ ವಿದ್ಯಾರ್ಥಿಗಳು



**ಬಾಗಲಕೋಟೆ:** ಜಿಲ್ಲೆಯ ಆಲಬಾಳ ಗ್ರಾಮದ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳು ಬಿಸಿಯೂಟ ಸೇವಿಸಿದ ನಂತರ ಚರಂಡಿ ಪಕ್ಕದಲ್ಲಿ ತಟ್ಟೆ ತೊಳೆಯುತ್ತಿರುವ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಶಿಕ್ಷಣ ವ್ಯವಸ್ಥೆಯ ಮೇಲಿನ ನಿರ್ಲಕ್ಷ್ಯ ಕುರಿತು ವ್ಯಾಪಕ ಚರ್ಚೆಗೆ ಕಾರಣವಾಗಿದೆ. ವೈರಲ್ ಆದ ಫೋಟೋಗಳು ಸಾರ್ವಜನಿಕರಲ್ಲಿ ಆಕ್ರೋಶ ಹುಟ್ಟಿಸಿದ್ದು, ಶಾಲೆಯಲ್ಲಿ ಸೂಕ್ತ ಕುಡಿಯುವ ನೀರು ಮತ್ತು ಸ್ವಚ್ಛತಾ ಸೌಲಭ್ಯಗಳ ಕೊರತೆ ಇದೆ ಎಂಬ ಆರೋಪ ಕೇಳಿಬಂದಿದೆ.

ವಿದ್ಯಾರ್ಥಿಗಳು ಬಿಸಿಯೂಟದ ನಂತರ ಕೊಳಚೆ ನೀರಿನ ಪಕ್ಕದಲ್ಲೇ ನಿಂತು ತಟ್ಟೆ ತೊಳೆಯುತ್ತಿರುವಂತೆ ಕಂಡ ದೃಶ್ಯವು ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಆತಂಕವನ್ನು ಹುಟ್ಟಿಸಿದೆ. ಪೋಷಕರು, ಗ್ರಾಮಸ್ಥರು ಹಾಗೂ ಸಾಮಾಜಿಕ ಕಾರ್ಯಕರ್ತರು ಶಿಕ್ಷಣ ಇಲಾಖೆಯ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬಿಸಿಯೂಟ ಯೋಜನೆ ಮಕ್ಕಳ ಪೌಷ್ಟಿಕತೆಗೆ ಮಾತ್ರ ಸೀಮಿತವಾಗದೆ, ಸ್ವಚ್ಛತೆಯೊಂದಿಗೆ ಜಾರಿಯಾಗಬೇಕು ಎಂಬ ಒತ್ತಾಯವೂ ಕೇಳಿಬಂದಿದೆ.

ಈ ಘಟನೆ ರಾಜ್ಯ ಮಟ್ಟದಲ್ಲಿಯೂ ಗಮನ ಸೆಳೆದಿದ್ದು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗ ತಕ್ಷಣ ಮಧ್ಯಪ್ರವೇಶಿಸಿದೆ. ಆಯೋಗದ ಅಧ್ಯಕ್ಷ ಶಶಿಧರ ಕೋಸಂಬಿ ಅವರು ಬಾಗಲಕೋಟೆ ಜಿಲ್ಲಾಧಿಕಾರಿಗೆ ಪತ್ರ ಬರೆದು, ಘಟನೆ ಕುರಿತು ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಶಾಲೆಗೆ ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು, ಎಸ್‌ಡಿಎಂಸಿ ಹಾಗೂ ಸಂಬಂಧಪಟ್ಟ ಶಿಕ್ಷಕರ ವಿರುದ್ಧ ಇಲಾಖಾ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಹಾಗೂ ಕೈಗೊಂಡ ಕ್ರಮದ ವರದಿಯನ್ನು ಆಯೋಗಕ್ಕೆ ಸಲ್ಲಿಸಬೇಕು ಎಂದು ನಿರ್ದೇಶನ ನೀಡಲಾಗಿದೆ.

ಜಿಲ್ಲಾಡಳಿತ ಸೂಚನೆಯ ಬೆನ್ನಲ್ಲೇ ಜಮಖಂಡಿ ಬಿಇಓ ಅಶೋಕ ಬಸಣ್ಣವರ್ ತಕ್ಷಣವೇ ಆಲಬಾಳ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪರಿಶೀಲನೆ ನಂತರ ಮಾಧ್ಯಮ ಗಳಿಗೆ ಪ್ರತಿಕ್ರಿಯಿಸಿದ ಅವರು, ವೈರಲ್ ಆಗಿರುವ ಮಾಹಿತಿ ಸಂಪೂರ್ಣ ಸತ್ಯವಲ್ಲ ಎಂದು ಸ್ಪಷ್ಟಪಡಿಸಿದರು. ಶಾಲೆಯಲ್ಲಿ ಪ್ರತ್ಯೇಕ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ತಟ್ಟೆ ತೊಳೆಯಲು ಅಗತ್ಯ ಸೌಲಭ್ಯಗಳಿವೆ. ಮಕ್ಕಳು ಚರಂಡಿ ನೀರಿನಲ್ಲಿ ತಟ್ಟೆ ತೊಳೆಯಲಿಲ್ಲ; ಬದಲಾಗಿ ಚರಂಡಿ ಪಕ್ಕದಲ್ಲಿದ್ದ ಫಿಲ್ಟರ್ ನೀರಿನ ಪೈಪ್ ಬಳಸಿ ತೊಳೆಯುತ್ತಿದ್ದಾರೆ ಎಂದು ವಿವರಿಸಿದರು.

ಈ ಕುರಿತು ಸಮಗ್ರ ವರದಿ ಮೇಲಾಧಿಕಾರಿಗಳಿಗೆ ಕಳುಹಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ಜೊತೆಗೆ ಶಾಲೆಯಲ್ಲಿ ನೀರು ಮತ್ತು ಸ್ವಚ್ಛತಾ ವ್ಯವಸ್ಥೆ ಇನ್ನಷ್ಟು ಸುಧಾರಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂಬ ಭರವಸೆಯನ್ನೂ ನೀಡಿದ್ದಾರೆ.

ವೈರಲ್ ಫೋಟೋ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆಗೆ ಕಾರಣವಾಗಿದ್ದು, ಶಿಕ್ಷಣ ಇಲಾಖೆಯ ಜವಾಬ್ದಾರಿತನ, ಶಾಲಾ ಮೂಲಸೌಕರ್ಯ ಮತ್ತು ಮಕ್ಕಳ ಸುರಕ್ಷತೆ ಕುರಿತು ಜನರು ಗಂಭೀರ ಪ್ರಶ್ನೆಗಳನ್ನು ಎತ್ತುತ್ತಿದ್ದಾರೆ. ಸಾರ್ವಜನಿಕರ ಪ್ರಕಾರ, ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಕೇವಲ ಆಡಳಿತಾತ್ಮಕ ಸಮಸ್ಯೆಯಲ್ಲ; ಅದು ಮಕ್ಕಳ ಹಕ್ಕುಗಳಿಗೆ ಸಂಬಂಧಿಸಿದ ವಿಷಯವಾಗಿದೆ.

ಗ್ರಾಮಸ್ಥರು ಮಕ್ಕಳಿಗೆ ಸುರಕ್ಷಿತ, ಸ್ವಚ್ಛ ಮತ್ತು ಮಾನವೀಯ ಪರಿಸರ ಒದಗಿಸುವುದು ಸರ್ಕಾರ ಮತ್ತು ಶಾಲಾ ಆಡಳಿತದ ಮೊದಲ ಆದ್ಯತೆಯಾಗಬೇಕು ಎಂದು ಆಗ್ರಹಿಸಿದ್ದಾರೆ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯ ವ್ಯಕ್ತವಾಗಿದೆ. ಈ ಪ್ರಕರಣ ಇದೀಗ ಗ್ರಾಮೀಣ ಶಾಲೆಗಳ ಮೂಲಸೌಕರ್ಯ ಮತ್ತು ಮೇಲ್ವಿಚಾರಣೆ ಕುರಿತು ರಾಜ್ಯಮಟ್ಟದ ಚರ್ಚೆಗೆ ದಾರಿ ಮಾಡಿಕೊಟ್ಟಿದೆ.



# ಗವಿಮಠ ಸ್ವತಂತ್ರ ಸಿದ್ದಲಿಂಗೇಶ್ವರ ಜಾತ್ರಾ ಮಹೋತ್ಸವಕ್ಕೆ ಚಾಲನೆ



**ಕೃಷ್ಣರಾಜಪೇಟೆ** ತಾಲ್ಲೂಕಿನ ಬೂಕನಕೆರೆ ಹೋಬಳಿಯ ಪ್ರಸಿದ್ಧ ಪುಣ್ಯಕ್ಷೇತ್ರವಾದ ಶ್ರೀ ಕ್ಷೇತ್ರ ಸ್ವತಂತ್ರ ಸಿದ್ದಲಿಂಗೇಶ್ವರ ಕಾಪನಹಳ್ಳಿ ಗವಿಮಠದಲ್ಲಿ ಜಾತ್ರಾ ಮಹೋತ್ಸವವು ಜರುಗಲಿದ್ದು, ಕ್ಷೇತ್ರದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮಠದ ಪೀಠಾಧ್ಯಕ್ಷರಾದ ಶ್ರೀ ಸ್ವತಂತ್ರ ಚನ್ನವೀರ ಮಹಾಸ್ವಾಮೀಜಿಗಳು ಪತ್ರಿಕಾ ಪ್ರಕಟಣೆಯಲ್ಲಿ ಕರೆ ನೀಡಿದ್ದರು,

**ಶ್ರೀ ಕ್ಷೇತ್ರದ ಪ್ರಮುಖ ಕಾರ್ಯಕ್ರಮಗಳ ವಿವರ:** ಧಾರ್ಮಿಕ ವಿಧಿವಿಧಾನಗಳೊಂದಿಗೆ ಆರಂಭವಾಗಲಿರುವ ಈ ಬಾರಿಯ ಜಾತ್ರಾ ಮಹೋತ್ಸವದ ಪ್ರಮುಖ ಘಟ್ಟಗಳು ಹೀಗಿವೆ;

ದಿನಾಂಕ: 30/01/2026 ಮತ್ತು 31/01/2026 ರಂದು ಜಾತ್ರಾ ಮಹೋತ್ಸವಕ್ಕೆ ಚಾಲನೆ ಮತ್ತು ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ಆರಂಭ,

ದಿನಾಂಕ: 01/02/026 ರಂದು ಅರಳಕುಪ್ಪೆ, ನಾಟನಹಳ್ಳಿ, ಅಳಿಯೂರು, ಗ್ರಾಮಸ್ಥರಿಂದ ಹಾಲರವಿ ಕಾರ್ಯಕ್ರಮ ವನ್ನು ಹಮ್ಮಿಕೊಳ್ಳಲಾಗಿದೆ,

ದಿನಾಂಕ: 02/02/2026 ರಂದು ವಿಠಲಪುರ ಗ್ರಾಮದಿಂದ ಮಡಿಲಮ್ಮ ದೇವಿ ಉತ್ಸವ ಮೂರ್ತಿಯು ಬಂದ ನಂತರ ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ಸ್ವಾಮಿ ಅವರ ಮಹಾ ರಥೋತ್ಸವ ನಡೆಯುತ್ತದೆ,

ದಿನಾಂಕ: 06/02/2026 ರಂದು ತೆಪ್ಪೋತ್ಸವ ಕಾರ್ಯಕ್ರಮ ಇರುತ್ತದೆ,

ಆದ್ದರಿಂದ ಕ್ಷೇತ್ರದ ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಕ್ಷೇತ್ರದ ಭಕ್ತಾದಿಗಳು ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು, ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ಸ್ವಾಮಿಯ ದರ್ಶನ ಪಡೆದು ಭಗವಂತನ ಕೃಪೆಗೆ ಪಾತ್ರರಾಗಬೇಕು ಎಂದು ಕ್ಷೇತ್ರದ ಪೀಠಾಧ್ಯಕ್ಷರಾದ ಶ್ರೀ ಸ್ವಾತಂತ್ರ್ಯ ಚೆನ್ನವೀರ ಮಹಾಸ್ವಾಮಿಜಿಗಳು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ,

ಜಾತ್ರೆಯ ಪ್ರಯುಕ್ತ ಮಠದಲ್ಲಿ ಭಕ್ತಾದಿಗಳಿಗೆ ಅನ್ನದಾಸೋಹ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ,

ಇದೇ ಸಂದರ್ಭದಲ್ಲಿ ಶ್ರೀ ಕ್ಷೇತ್ರದ ಪೀಠಾಧ್ಯಕ್ಷರಾದ ಶ್ರೀ ಸ್ವತಂತ್ರ ಚನ್ನವೀರ ಮಹಾ ಸ್ವಾಮೀಜಿಗಳು, ಗವಿಮಠ ಮೊರಾರ್ಜಿ ಶಾಲೆಯ ಶಿಕ್ಷಕರಾದ ರೂಪ ಕುಮಾರಸ್ವಾಮಿ, ಮಮತ ಚಂದನ್, ಕೀರ್ತನಾ, ಆಶಾ, ಭವ್ಯ, ಜ್ಯೋತಿ, ದ್ರಾಕ್ಷಾಯಿಣಿ, ಹಂಸ, ಕಾವ್ಯ, ಶ್ರೀನಿವಾಸ್ ಪ್ರಸಾದ್, ಸೇರಿದಂತೆ ಕ್ಷೇತ್ರದ ಭಕ್ತಾದಿಗಳು ಇದ್ದರು

# ರಾಜ್ಯದ ಸರ್ಕಾರಿ ನೌಕರರಿಗೆ 'ಖಾದಿ ಉಡುಪು' ಕಡ್ಡಾಯ



**ಬೆಂಗಳೂರು:** ರಾಜ್ಯ ಸರ್ಕಾರದ ಅಧಿಕಾರಿಗಳು ಹಾಗೂ ನೌಕರರಲ್ಲಿ ಸ್ವದೇಶಿ ಪ್ರೇಮವನ್ನು ಬೆಳೆಸುವ ಹಾಗೂ ಖಾದಿ ಉತ್ಪನ್ನಗಳ ಬಳಕೆಯನ್ನು ಉತ್ತೇಜಿಸುವ ಉದ್ದೇಶದಿಂದ ಸರ್ಕಾರ ಮಹತ್ವದ ತೀರ್ಮಾನ ಕೈಗೊಂಡಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ, ಪ್ರತಿ ತಿಂಗಳ ಮೊದಲ ಶನಿವಾರದಂದು ಎಲ್ಲಾ ಸರ್ಕಾರಿ ನೌಕರರು ಕಡ್ಡಾಯವಾಗಿ ಖಾದಿ ಉಡುಪು ಧರಿಸಬೇಕು ಎಂದು ನಿರ್ಧರಿಸಲಾಗಿದೆ. ಈ ನಿಯಮವು ಕೇವಲ ಸರ್ಕಾರದ ಇಲಾಖೆಗಳಿಗೆ ಮಾತ್ರ ಸೀಮಿತವಾಗದೇ, ಸರ್ಕಾರಿ ಸ್ವಾಮ್ಯದ ನಿಗಮ-ಮಂಡಳಿ, ಪ್ರಾಧಿಕಾರಗಳು ಮತ್ತು ಅನುದಾನಿತ ಸಂಸ್ಥೆಗಳಿಗೂ ಅನ್ವಯವಾಗಲಿದೆ.

ಸ್ವದೇಶಿ ವಸ್ತುಗಳಿಗೆ ಉತ್ತೇಜನ ನೀಡುವ ಜೊತೆಗೆ ಖಾದಿ ಉತ್ಪನ್ನಗಳ ಬಳಕೆಯನ್ನು ಜನಸಾಮಾನ್ಯರಲ್ಲಿ ಜನಪ್ರಿಯಗೊಳಿಸುವುದು ಈ ಯೋಜನೆಯ ಪ್ರಮುಖ ಗುರಿಯಾಗಿದೆ. ಇದರ ಮೂಲಕ ಗ್ರಾಮೀಣ ಕೈಗಾರಿಕೆಗಳಿಗೆ ಹೊಸ ಜೀವ ತುಂಬುವ ಜೊತೆಗೆ ಖಾದಿ ಕಾರ್ಮಿಕರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವ ಆಶಯವೂ ಸರ್ಕಾರದ್ದಾಗಿದೆ.

**ಖಾದಿ ಖರೀದಿಗೆ ವಿಶೇಷ ರಿಯಾಯಿತಿ:**ಸರ್ಕಾರಿ ನೌಕರರು ತಮ್ಮ ಖಾದಿ ಉಡುಪುಗಳನ್ನು ಸರ್ಕಾರಿ ಸ್ವಾಮ್ಯದ ಖಾದಿ ಮತ್ತು ಗ್ರಾಮೋದ್ಯೋಗ ಮಳಿಗೆಗಳಲ್ಲಿಯೇ ಖರೀದಿಸಬೇಕು ಎಂದು ಸೂಚಿಸಲಾಗಿದೆ. ನೌಕರರನ್ನು ಈ ಯೋಜನೆಯತ್ತ ಆಕರ್ಷಿಸಲು, ಖಾದಿ ಗ್ರಾಮೋದ್ಯೋಗ ಮಂಡಳಿ ಈಗಾಗಲೇ ನೀಡುತ್ತಿರುವ ರಿಯಾಯಿತಿಗೆ ಹೆಚ್ಚುವರಿಯಾಗಿ ಶೇ.5ರಷ್ಟು ವಿಶೇಷ ರಿಯಾಯಿತಿ ನೀಡಲು ಸರ್ಕಾರ ನಿರ್ಧರಿಸಿದೆ. ಇದರಿಂದ ಗುಣಮಟ್ಟದ ಖಾದಿ ಬಟ್ಟೆಗಳು ಕೈಗೆಟಕುವ ದರದಲ್ಲಿ ಲಭ್ಯವಾಗಲಿದ್ದು, ನೌಕರರ ಮೇಲಿನ ಆರ್ಥಿಕ ಒತ್ತಡವೂ ಕಡಿಮೆಯಾಗಲಿದೆ.

ಈ ಕ್ರಮದಿಂದ ಖಾದಿ ಮಳಿಗೆಗಳ ವ್ಯಾಪಾರ ವಹಿವಾಟು ಹೆಚ್ಚಾಗುವ ನಿರೀಕ್ಷೆಯಿದ್ದು, ಗ್ರಾಮೀಣ ಭಾಗದಲ್ಲಿನ ಕೈಮಗ್ಗ ಹಾಗೂ ಕುಶಲಕರ್ಮಿಗಳಿಗೆ ಸ್ಥಿರ ಆದಾಯ ಸಿಗಲಿದೆ ಎಂಬ ವಿಶ್ವಾಸವನ್ನು ಸರ್ಕಾರ ವ್ಯಕ್ತಪಡಿಸಿದೆ.

**ಪುರುಷರು-ಮಹಿಳೆಯರಿಗೆ ಸ್ಪಷ್ಟ ಡ್ರೆಸ್ ಕೋಡ್:**ಸಭೆಯಲ್ಲಿ ಉಡುಪಿನ ವಿನ್ಯಾಸ ಮತ್ತು ಶಿಸ್ತು ಪಾಲನೆಯ ಕುರಿತಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ನೀಡಲಾಗಿದೆ. ಪುರುಷ ನೌಕರರು ಖಾದಿ ಶರ್ಟ್-ಪ್ಯಾಂಟ್ ಅಥವಾ ಖಾದಿ ಓವರ್ ಕೋಟ್ ಧರಿಸಬೇಕು. ಮಹಿಳಾ ನೌಕರರು ಖಾದಿ ಅಥವಾ ಖಾದಿ ಸಿಲ್ಕ್ ಸೀರೆ ಅಥವಾ ಚೂಡಿದಾರ್ ಧರಿಸುವುದು ಕಡ್ಡಾಯವಾಗಿರಲಿದೆ.

ಈ ಡ್ರೆಸ್ ಕೋಡ್ ಮೂಲಕ ಕಚೇರಿಗಳಲ್ಲಿ ಶಿಸ್ತಿನ, ಸಾಂಪ್ರದಾಯಿಕ ಹಾಗೂ ವೃತ್ತಿಪರ ವಾತಾವರಣ ನಿರ್ಮಿಸುವ ಜೊತೆಗೆ, ಭಾರತೀಯ ಸಂಸ್ಕೃತಿಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ.

**ಏಪ್ರಿಲ್ 21ರಿಂದ ಅಧಿಕೃತ ಚಾಲನೆ:**ಈ ನೂತನ ಯೋಜನೆಯನ್ನು 2026ರ ಏಪ್ರಿಲ್ 21ರಂದು, ಅಂದರೆ 'ಸರ್ಕಾರಿ ನೌಕರರ ದಿನಾಚರಣೆ'ಯಂದು ಅಧಿಕೃತವಾಗಿ ಚಾಲನೆ ನೀಡಲು ಸರ್ಕಾರ ನಿರ್ಧರಿಸಿದೆ. ಈ ಕುರಿತಂತೆ ಶೀಘ್ರದಲ್ಲೇ ಅಧಿಕೃತ ಸುತ್ತೋಲೆ ಹೊರಡಿಸಲಾಗುವುದು. ಆದೇಶ ಜಾರಿಯಾದ ಬಳಿಕ ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಪ್ರತಿ ತಿಂಗಳ ಮೊದಲ ಶನಿವಾರ ಖಾದಿ ಉಡುಪಿನ ದಿನವಾಗಿ ಆಚರಿಸಲಾಗಲಿದೆ.

**ಸೇನಾ ಮಾದರಿಯಲ್ಲಿ 'ಸರ್ಕಾರಿ ನೌಕರರ ಕ್ಯಾಂಟೀನ್':**ಖಾದಿ ಉಡುಪು ಯೋಜನೆಯ ಜೊತೆಗೆ ಸರ್ಕಾರ ಮತ್ತೊಂದು ಮಹತ್ವಾಕಾಂಕ್ಷಿ ಯೋಜನೆಗೂ ಕೈ ಹಾಕಿದೆ. ಎಂಎಸ್‌ಐಎಲ್ (MSIL) ಮೂಲಕ ಸೇನಾ ಕ್ಯಾಂಟೀನ್ ಮಾದರಿಯಲ್ಲಿ ರಾಜ್ಯ ಸರ್ಕಾರಿ ನೌಕರರಿಗಾಗಿ ವಿಶೇಷ 'ಸರ್ಕಾರಿ ನೌಕರರ ಕ್ಯಾಂಟೀನ್' ಆರಂಭಿಸುವ ಚಿಂತನೆ ನಡೆದಿದೆ. 2026-27ನೇ ಸಾಲಿನ ಬಜೆಟ್‌ನಲ್ಲಿ ಈ ಯೋಜನೆಯನ್ನು ಘೋಷಿಸುವ ಸಾಧ್ಯತೆ ಹೆಚ್ಚಿದ್ದು, ದಿನಬಳಕೆ ವಸ್ತುಗಳನ್ನು ಕಡಿಮೆ ದರದಲ್ಲಿ ನೌಕರರಿಗೆ ಪೂರೈಸುವ ಗುರಿಯಿದೆ.

# ಅಕ್ರಮ ಸಂಬಂಧ -ಒಬ್ಬನ ಹತ್ಯೆ

**ಹಾಸನ:** ನಗರದ ಕೆ.ಆರ್.ಪುರಂ ಪ್ರದೇಶದಲ್ಲಿ ಅಕ್ರಮ ಸಂಬಂಧ ವಿಚಾರವಾಗಿ ನಡೆದ ಗಲಾಟೆ ಕೊನೆಗೆ ಭೀಕರ ಹತ್ಯೆಯಲ್ಲಿ ಅಂತ್ಯಗೊಂಡಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಒಬ್ಬಳೇ ಮಹಿಳೆಯ ಜೊತೆ ಇಬ್ಬರು ಪುರುಷರು ಅಕ್ರಮ ಸಂಬಂಧ ಹೊಂದಿದ್ದ ಹಿನ್ನೆಲೆ ಹಲವು ದಿನಗಳಿಂದ ವೈಮನಸ್ಸು ನಡೆಯುತ್ತಿತ್ತು ಎಂದು ತಿಳಿದುಬಂದಿದೆ. ಇದೇ ವೈಷಮ್ಯ ಕೊಲೆಗೇ ಕಾರಣವಾಗಿದೆ ಎಂದು ಪೊಲೀಸರು ಪ್ರಾಥಮಿಕ ತನಿಖೆಯಲ್ಲಿ ತಿಳಿಸಿದ್ದಾರೆ.



**ಮೃತ ಆನಂದ್**

ಹತ್ಯೆಗೆ ಒಳಗಾದ ವ್ಯಕ್ತಿಯನ್ನು 48 ವರ್ಷದ ಅಡುಗೆ ಕಂಟ್ರ್ಯಾಕ್ಟರ್ ಆನಂದ್ ಎಂದು ಗುರುತಿಸಲಾಗಿದೆ. ಆರೋಪಿಯನ್ನು ಧರಣೇಂದ್ರಪ್ರಕಾಶ್ ಎಂದು ಗುರುತಿಸಿದ್ದು, ಈ ಇಬ್ಬರೂ ಒಂದೇ ಮಹಿಳೆಯ ಜೊತೆ ಸಂಬಂಧ ಹೊಂದಿದ್ದ ವಿಚಾರವೇ ವೈಷಮ್ಯಕ್ಕೆ ಮೂಲ ಕಾರಣವಾಗಿತ್ತು ಎಂದು ಹೇಳಲಾಗಿದೆ. ಘಟನೆ ನಡೆದ ದಿನ ಇಬ್ಬರೂ ಮದ್ಯ ಸೇವಿಸುವ ವೇಳೆ ಪರಸ್ಪರ ವಾಗ್ವಾದಕ್ಕೆ ಇಳಿದಿದ್ದು, ಗಲಾಟೆ ತೀವ್ರ ಸ್ವರೂಪ ಪಡೆದಿತ್ತು. ನಂತರ ಸ್ಥಳೀಯರು ಮಧ್ಯಪ್ರವೇಶಿಸಿ ಇಬ್ಬರನ್ನೂ ಬೇರ್ಪಡಿಸಿದ್ದರಿಂದ ತಾತ್ಕಾಲಿಕವಾಗಿ ಪರಿಸ್ಥಿತಿ ಶಾಂತಗೊಂಡಿತ್ತು.

ಆದರೆ, ಗಲಾಟೆಯ ಬಳಿಕವೂ ಕೋಪ ಶಮನವಾಗದ ಆರೋಪಿ ಧರಣೇಂದ್ರಪ್ರಕಾಶ್ ಮನೆಗೆ ತೆರಳಿದ ನಂತರ ಆನಂದ್‌ಗೆ ಕರೆ ಮಾಡಿ ಮಹಿಳೆಯ ಮನೆ ಬಳಿ ಬರಲು ಹೇಳಿದ್ದಾನೆ. ಏನೂ ಅನುಮಾನಿಸದ ಆನಂದ್ ತನ್ನ ಬೈಕ್‌ನಲ್ಲಿ ಅಲ್ಲಿಗೆ ಬಂದಿದ್ದಾನೆ. ಈ ವೇಳೆ ಪೂರ್ವಯೋಜಿತವಾಗಿ ಕಾಯುತ್ತಿದ್ದ ಆರೋಪಿ, ಚಾಕುವಿನಿಂದ ಐದಾರು ಬಾರಿ ಇರಿದು ಆನಂದ್‌ನನ್ನು ಹತ್ಯೆ ಮಾಡಿದ್ದಾನೆ ಎಂದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಗಂಭೀರವಾಗಿ ಗಾಯಗೊಂಡ ಆನಂದ್ ಸ್ಥಳದಲ್ಲೇ ಕುಸಿದು ಬಿದ್ದಿದ್ದಾನೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಬಡಾವಣೆ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಘಟನೆಯ ಕೇಂದ್ರಬಿಂದುವಾಗಿರುವ ಮಹಿಳೆಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಹತ್ಯೆ ಎಸಗಿ ಪರಾರಿಯಾಗಿರುವ ಆರೋಪಿ ಧರಣೇಂದ್ರಪ್ರಕಾಶ್ ಪತ್ತೆಗೆ ಪೊಲೀಸರು ವಿಶೇಷ ತಂಡಗಳನ್ನು ರಚಿಸಿ ಬಲೆ ಬೀಸಿದ್ದಾರೆ. ಸಿಸಿಟಿವಿ ದೃಶ್ಯಗಳು ಹಾಗೂ ಕರೆ ವಿವರಗಳನ್ನು ಆಧರಿಸಿ ತನಿಖೆ ಮುಂದುವರಿದಿದೆ. ವೈಯಕ್ತಿಕ ಸಂಬಂಧಗಳ ಗೊಂದಲ ಹೇಗೆ ಜೀವಹಾನಿಗೆ ದಾರಿ ಮಾಡಿಕೊಡಬಹುದು ಎಂಬುದಕ್ಕೆ ಈ ಘಟನೆ ಮತ್ತೊಂದು ಉದಾಹರಣೆಯಾಗಿದೆ ಎಂದು ಸ್ಥಳೀಯರು ಹೇಳುತ್ತಿದ್ದಾರೆ.




Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಅಂತಿಮ ವಿಧಿಗೆ ಮಗಳ ದೇಹ ಕೇಳಿದ ತಂದೆಯ ಆಕ್ರಂದನ



**ಪುಣೆ:** ಮಹಾರಾಷ್ಟ್ರದ ಉಪ ಮುಖ್ಯಮಂತ್ರಿ ಅಜಿತ್ ಪವಾ ರ್ಬುಧವಾರ ಬೆಳಗ್ಗೆ ಸಂಭವಿಸಿದ ವಿಮಾನ ಅಪಘಾತದಲ್ಲಿ ಪ್ರಾಣ ಕಳೆದು ಕೊಂಡಿದ್ದಾರೆ. ವಿಮಾನದಲ್ಲಿ ಅವರ ಜತೆ ಇತರೆ ನಾಲ್ವರು ಸಿಬ್ಬಂದಿ ಇದ್ದರು ಅದರಲ್ಲಿ ಪಿಂಕಿ ಮಾಲಿ ಕೂಡ ಒಬ್ಬರು. ಸಾಯುವ ಮುನ್ನ ತಂದೆಗೆ ಕರೆ ಮಾಡಿ ಅಪ್ಪ ನಾನು ಇವತ್ತು ಅಜಿತ್ ಪವಾರ್ ಜತೆ ವಿಮಾನದಲ್ಲಿ ಪ್ರಯಾಣ ಮಾಡ್ತಿದ್ದೀನಿ ಗೊತ್ತಾ ಎಂದು ಖುಷಿಯಿಂದ ಹೇಳಿಕೊಂಡಿದ್ದರು. ಆದರೆ ಇಬ್ಬರಿಗೂ ಅದು ಕೊನೆಯ ಭೇಟಿಯಾಗಿತ್ತು. ಮುಂಬೈನ ವರ್ಲಿಯ ನಿವಾಸಿ ಪಿಂಕಿ ತನ್ನ ತಂದೆಗೆ, ಅಪ್ಪಾ, ನಾನು ಅಜಿತ್ ಪವಾರ್ ಜೊತೆ ಬಾರಾಮತಿಗೆ ವಿಮಾನದಲ್ಲಿ ಹೋಗುತ್ತಿದ್ದೇನೆ. ಅವರನ್ನು ಬಿಟ್ಟು ಬಂದ ನಂತರ, ನಾನು ನಾಂದೇಡ್‌ಗೆ ಹೋಗುತ್ತೇನೆ. ನಾವು ನಾಳೆ ಮಾತನಾಡೋಣ ಎಂದು ಹೇಳಿದ್ದು. ಇತ್ತೀಚಿನ ಹಲವಾರು ಪ್ರವಾಸಗಳಲ್ಲಿ ಅವರು ಪವಾರ್ ಜೊತೆಗಿದ್ದರು ಎಂದು ಅವರು ಉಲ್ಲೇಖಿಸಿದ್ದಾರೆ. ನಾನು ನನ್ನ ಮಗಳನ್ನು ಕ ಳೆ ದು ಕೊಂ ಡಿ ದ್ದೇ ನೆ . ನಿಖರವಾಗಿ ಏನಾಯಿತು ಎಂದು ನನಗೆ ತಿಳಿದಿಲ್ಲ, ಏಕೆಂದರೆ ಅಂತಹ ಘಟನೆಗಳ ಬಗ್ಗೆ ನನಗೆ ಯಾವುದೇ ತಾಂತ್ರಿಕ ಜ್ಞಾನವಿಲ್ಲ. ನಾನು ಸಂಪೂರ್ಣವಾಗಿ ಛಿದ್ರಗೊಂಡಿದ್ದೇನೆ. ನನ್ನ ಮಗಳ ಅಂತ್ಯಕ್ರಿಯೆಯನ್ನು ಗೌರವದಿಂದ ಮಾಡಲು ನನಗೆ ಅವಳ ದೇಹ ಬೇಕು. ನಾನು ಬಯಸುವುದು ಇಷ್ಟೇ ಎಂದು ಅವರು ಹೇಳಿದರು. ಪುಣೆ ಜಿಲ್ಲೆಯ ಬಾರಾಮತಿ ವಿಮಾನ ನಿಲ್ದಾಣದ ಬಳಿ ಬುಧವಾರ ಬೆಳಗ್ಗೆ ಈ ಅಪಘಾತ ಸಂಭವಿಸಿದ್ದು, ದೆಹಲಿ ಮೂಲದ ವಿಎಸ್‌ಆರ್ ವೆಂಚರ್ಸ್ ನಿರ್ವಹಿಸುವ ವಿಟಿ-ಎಸ್‌ಎಸ್‌ಕೆ ನೋಂದಣಿ ಹೊಂದಿರುವ ಲಿಯರ್‌ಜೆಟ್ 45 ವಿಮಾನ ಅಪಘಾತಕ್ಕೀಡಾಗಿತ್ತು. ವಿಮಾನದಲ್ಲಿ ಐದು ಮಂದಿ ಇದ್ದರು ಅವರಲ್ಲಿ ಉಪಮುಖ್ಯಮಂತ್ರಿ ಅಜಿತ್ ಪವಾರ್, ಅವರ ವೈಯಕ್ತಿಕ ಭದ್ರತಾ ಅಧಿಕಾರಿ ವಿದೀಪ್ ಜಾಧವ್, ವಿಮಾನ ಸೇವಕಿ ಪಿಂಕಿ ಮಾಲಿ, ಪೈಲಟ್-ಇನ್-ಕಮಾಂಡ್ ಸುಮಿತ್ ಕಪೂರ್ ಮತ್ತು ಸೆಕೆಂಡ್-ಇನ್-ಕಮಾಂಡ್ ಶಾಂಭವಿ ಪಾಠಕ್. ವಿಮಾನದ ವಿವರಗಳ ಪ್ರಕಾರ, ವಿಮಾನವು ಬೆಳಗ್ಗೆ 8.10 ಕ್ಕೆ ಮುಂಬೈನಿಂದ ಹೊರಟು 8.45 ರ ಸುಮಾರಿಗೆ ರಾಡಾರ್‌ನಿಂದ ಕಣ್ಮರೆಯಾಯಿತು, 8.50 ಕ್ಕೆ ಅಪಘಾತಕ್ಕೀಡಾಯಿತು. ಫೆಬ್ರವರಿ 5 ರಂದು ನಡೆಯಲಿರುವ ಜಿಲ್ಲಾ ಪರಿಷತ್ ಚುನಾವಣೆಗೆ ಮುನ್ನ ಪುಣೆ ಜಿಲ್ಲೆಯಲ್ಲಿ ನಾಲ್ಕು ರ್ಯಾಲಿಗಳನ್ನು ಉದ್ದೇಶಿಸಿ ಮಾತನಾಡಲು ಪವಾರ್ ತೆರಳುತ್ತಿದ್ದರು. ವಿಮಾನವು ಲ್ಯಾಂಡಿಂಗ್ ಸಮಯದಲ್ಲಿ ನಿಯಂತ್ರಣ ಕಳೆದುಕೊಂಡ ನಂತರ, ತುರ್ತು ಸೇವೆಗಳು ಮತ್ತು ಹಿರಿಯ ಭದ್ರತಾ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಓಡೋಡಿ ಬಂದಿದ್ದರು. ರಕ್ಷಣಾ ತಂಡಗಳನ್ನು ತಕ್ಷಣವೇ ನಿಯೋಜಿಸಲಾಯಿತು.

# ಕಟ್ಟಡದಲ್ಲಿ ಭಾರೀ ಅಗ್ನಿ ಅವಘಡ – 21 ಮಂದಿ ಸಜೀವ ದಹನ



**ಕೋಲ್ಕತ್ತಾ:** ನಗರಕ್ಕೆ ಸಮೀಪದಲ್ಲಿರುವ ಕಟ್ಟಡವೊಂದರಲ್ಲಿ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಕನಿಷ್ಠ 21 ಮಂದಿ ಸಜೀವ ದಹನಗೊಂಡಿರುವ ದಾರುಣ ಘಟನೆ ರಾಜ್ಯವನ್ನು ಬೆಚ್ಚಿಬೀಳಿಸಿದೆ. ಸುಟ್ಟು ಕರಕಲಾಗಿದ್ದ ಎಲ್ಲಾ 21 ಮೃತದೇಹಗಳನ್ನು ಅವಶೇಷಗಳ ಮಧ್ಯದಿಂದ ಹೊರತೆಗೆದಿದ್ದು, ಇನ್ನೂ ನಾಪತ್ತೆಯಾಗಿರುವ 28 ಮಂದಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕೋಲ್ಕತ್ತಾ ನಗರಕ್ಕೆ ಹತ್ತಿರವಿರುವ ದಕ್ಷಿಣ 24 ಪರಗಣ ಜಿಲ್ಲೆಯ ಆನಂದಪುರ ಪ್ರದೇಶದಲ್ಲಿ ಸಂಭವಿಸಿದೆ. ಎರಡು ಗೋದಾಮುಗಳು ಮತ್ತು ಮೊಮೊ ಉತ್ಪಾದನಾ ಘಟಕವಿದ್ದ ಕಟ್ಟಡದಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ನಿಮಿಷಗಳಲ್ಲಿ ಭಾರೀ ಅಗ್ನಿಗೆ ಆಹುತಿಯಾಗಿದೆ. ಕಟ್ಟಡದೊಳಗೆ ಕೆಲಸ ಮಾಡುತ್ತಿದ್ದ ಹಲವರು ಹೊರಬರಲು ಸಾಧ್ಯವಾಗದೇ ಸಿಲುಕಿಕೊಂಡಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಅನೇಕ ವಾಹನಗಳು ಸ್ಥಳಕ್ಕೆ ಧಾವಿಸಿದ್ದು, ಗಂಟೆಗಳ ಕಾಲ ಬೆಂಕಿ ನಂದಿಸುವ ಕಾರ್ಯ ನಡೆಸಲಾಗಿದೆ. ಬೆಂಕಿಯ ತೀವ್ರತೆ ಹೆಚ್ಚಿದ್ದರಿಂದ ರಕ್ಷಣಾ ಕಾರ್ಯಾಚರಣೆ ಸಂಕೀರ್ಣವಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪೊಲೀಸರು ಸುತ್ತಮುತ್ತಲಿನ ಪ್ರದೇಶವನ್ನು ಬಂದ್ ಮಾಡಿ, ಕಟ್ಟಡವಿದ್ದ ರಸ್ತೆಯಲ್ಲಿ ಸಂಚಾರ ನಿರ್ಬಂಧ ವಿಧಿಸಿದ್ದಾರೆ. ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ಬಿಎನ್‌ಎಸ್ ಸೆಕ್ಷನ್ 163 ಅಡಿಯಲ್ಲಿ ನಿಷೇಧಾಜ್ಞೆಯನ್ನೂ ಜಾರಿಗೊಳಿಸಲಾಗಿದೆ.

ಅವಶೇಷಗಳ ನಡುವೆ ಸಿಲುಕಿರುವವರನ್ನು ಪತ್ತೆಹಚ್ಚಲು ರಕ್ಷಣಾ ತಂಡಗಳು ಭಾರೀ ಯಂತ್ರೋಪಕರಣಗಳ ಸಹಾಯದಿಂದ ಶೋಧ ಕಾರ್ಯ ಮುಂದುವರಿಸಿವೆ. ಹೊಗೆ ಮತ್ತು ಉಷ್ಣತೆಯ ನಡುವೆಯೂ ಸಿಬ್ಬಂದಿ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಗಾಯಾಳುಗಳನ್ನ ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ.

ಘಟನಾ ಸ್ಥಳಕ್ಕೆ ವಿಪಕ್ಷ ನಾಯಕ ಸುವೇಂದು ಅಧಿಕಾರಿ ಸೇರಿದಂತೆ ಬಿಜೆಪಿ ನಾಯಕರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಗ್ನಿ ದುರಂತದ ಪ್ರಮಾಣ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚುವ ಭೀತಿ ಇದೆ ಎಂದು ಅವರು ತಿಳಿಸಿದ್ದಾರೆ. ಘಟನೆಯ ಬಗ್ಗೆ ಸಮಗ್ರ ತನಿಖೆ ನಡೆಸಿ ಕಾರಣ ಪತ್ತೆಹಚ್ಚಬೇಕು ಎಂದು ಒತ್ತಾಯಿಸಲಾಗಿದೆ.

ಪೊಲೀಸರ ಪ್ರಕಾರ, ಕಟ್ಟಡದ ಭದ್ರತಾ ವ್ಯವಸ್ಥೆ, ಅಗ್ನಿ ಸುರಕ್ಷತಾ ಮಾನದಂಡಗಳು ಮತ್ತು ತುರ್ತು ನಿರ್ಗಮನ ವ್ಯವಸ್ಥೆಗಳ ಬಗ್ಗೆ ತನಿಖೆ ನಡೆಯುತ್ತಿದೆ. ಕಟ್ಟಡದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರ ಕುಟುಂಬಗಳು ಆತಂಕದಲ್ಲಿ ಕಾಯುತ್ತಿದ್ದು, ನಾಪತ್ತೆಯಾದವರ ಬಗ್ಗೆ ಯಾವುದೇ ಮಾಹಿತಿ ಸಿಗುತ್ತಿಲ್ಲ.

ಈ ದುರಂತ ನಗರ ಕೈಗಾರಿಕಾ ಪ್ರದೇಶಗಳಲ್ಲಿ ಅಗ್ನಿ ಸುರಕ್ಷತಾ ನಿಯಮಗಳ ಅನುಷ್ಠಾನ ಕುರಿತು ಮತ್ತೆ ಗಂಭೀರ ಪ್ರಶ್ನೆ ಎಬ್ಬಿಸಿದೆ. ಅಧಿಕಾರಿಗಳು ಘಟನೆಗೆ ಸಂಬಂಧಿಸಿದ ಎಲ್ಲಾ ಆಯಾಮಗಳನ್ನು ಪರಿಶೀಲಿಸಿ ವರದಿ ಸಲ್ಲಿಸುವುದಾಗಿ ತಿಳಿಸಿದ್ದಾರೆ.

# ಲಕ್ಷ ಮನೆಗಳಲ್ಲಿ ಗ್ರಂಥಾಲಯ ಸ್ಥಾಪನೆ ಗುರಿ

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ದೇವನಹಳ್ಳಿ ನಗರದ ಪ್ರವಾಸಿ ಮಂದಿರದಲ್ಲಿ "ಮನೆಗೊಂದು ಗ್ರಂಥಾಲಯ" ಕಾರ್ಯಕ್ರಮದ ಕರಪತ್ರ ಬಿಡುಗಡೆ ಮತ್ತು ಜಿಲ್ಲಾ ಸಮಿತಿಯ ಸದಸ್ಯರಿಗೆ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮ ನೆರವೇರಿಸಲಾಯಿತು. ಆಪ್ತ ಕಾರ್ಯದರ್ಶಿ, ಶ್ರೀನಿವಾಸ್ ಕರಿಯಪ್ಪ ಕಾರ್ಯಕ್ರಮ ಕುರಿತು ಪ್ರಸ್ತಾವಿಕವಾಗಿ ಮಾತನಾಡಿದರು.ಕಾರ್ಯಕ್ರಮದ ಉದ್ಘಾಟನೆ ಮಾಡಿ,ಪ್ರಾಧಿಕಾರದ ಅಧ್ಯಕ್ಷರಾದ, ಡಾ. ಮಾನಸ ಮಾತನಾಡಿ ಗ್ರಂಥಾಲಯದ ಮಹತ್ವವನ್ನು ತಿಳಿಸಿದರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇವರ ಸಹಕಾರದಿಂದ ರಾಜ್ಯದಲ್ಲಿ ಒಂದು ಲಕ್ಷ ಮನೆಗಳಲ್ಲಿ ಮನೆಗೊಂದು ಗ್ರಂಥಾಲಯ ತೆರೆಯುವ ಉದ್ದೇಶ ಹೊಂದಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶರಣಯ್ಯ ಹಿರೇಮಠ, ಸಂಪತ್ ಕುಮಾರ್, ಚಂದ್ರಶೇಖರ್ ಹಡಪದ್ ಜಿಲ್ಲಾ ಪತ್ರಕರ್ತರ ಅಧ್ಯಕ್ಷರಾದ ಜಿ. ಶ್ರೀನಿವಾಸ್ ಮಾತನಾಡಿದರು ಸಿ ಪಿ. ರೆಡ್ಡಿ ಕುವೆಂಪು ರವರ ಎಲ್ಲಾದರೂ ಇರು ಎಂಬ ಕವನವನ್ನು ಹಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಸಾಪ ಜಿಲ್ಲಾಧ್ಯಕ್ಷ ಬಿ ಎನ್. ಕೃಷ್ಣಪ್ಪ ವಹಿಸಿದ್ದರು. ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ಅಧ್ಯಕ್ಷ ವಿನೋದ್ ಕುಮಾರ್ ಗೌಡ,ಆಪ್ತ ಕಾರ್ಯದರ್ಶಿ ಶ್ರೀನಿವಾಸ್ ಕರಿಯಪ್ಪ,ದೇ.ಕಸಾಪ ಅಧ್ಯಕ್ಷ ಆರ್.ಕೆ.ನಂಜೇಗೌಡ, ಹೋ ಕಸಾಪ ಅಧ್ಯಕ್ಷ ಎಂ.ಮುನಿರಾಜು, ನೆಲಮಂಗಲ ಕಸಾಪ ಅಧ್ಯಕ್ಷ ಪ್ರಕಾಶ್ ಮೂರ್ತಿ, ಸಾಹಿತಿ ಕಾರಹಳ್ಳಿ ಶ್ರೀನಿವಾಸ್ ಕಲಾವಿದರಾದ ಮೋಹನ್ ಬಾಬು, ಆವತಿಯ ರಾಧಾರೆಡ್ಡಿ, ಮಾಧವಿಕಾಂತರಾಜ್, ಶಶಿಕಲಾ, ಪುನೀತ ಮುಂತಾದವರು ಉಪಸ್ಥಿತರಿದ್ದರು. ಬಿ.ಎನ್.ಕೃಷ್ಣಪ್ಪ,ರಬ್ಬನಹಳ್ಳಿ ಕೆಂಪಣ್ಣ, ಪ್ರಮೀಳಾ ಮಹದೇವ,ಚೌಡೇಗೌಡ, ಗಂಗರಾಜು ಶಿರವಾರ,ಪ್ರದೀಪ್ ಕುಮಾರ್, ಇವರುಗಳಿಗೆ ಗ್ರಂಥಾಲಯ ಸಮಿತಿಯ ಸದಸ್ಯರಾಗಿ ನೇಮಕಾತಿ ಪ್ರಮಾಣ ಪತ್ರ ವನ್ನು ನೀಡಲಾಯಿತು. ಯಲಿಯೂರು ದೇವರಾಜ್ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಡಾ ಮಾನಸ ಅವರನ್ನು ಜಿಲ್ಲಾ ಕಸಾಪ ಘಟಕದ ವತಿಯಿಂದ ಅಭಿನಂದಿಸಲಾಯಿತು



# ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ

**ಬೆಂಗಳೂರು ಗ್ರಾಮಾಂತರ:** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಹಯೋಗದಲ್ಲಿ 2025-26 ನೇ ಸಾಲಿನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭವು ಜನವರಿ 30(ಶುಕ್ರವಾರ) ರಂದು ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ನೆರವೇರಿಸಲಿದ್ದಾರೆ.ಕರ್ನಾಟಕ ಸರ್ಕಾರದ 5ನೇ ಹಣಕಾಸು ಆಯೋಗದ ಅಧ್ಯಕ್ಷರಾದ ಸಿ.ನಾರಾಯಣಸ್ವಾಮಿ ಹಾಗೂ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಹೊಸಕೋಟೆ ಶಾಸಕರಾದ ಶರತ್ ಕುಮಾರ ಬಚ್ಚೇಗೌಡಘನ ಉಪಸ್ಥಿತಿಯಲ್ಲಿ ವಹಿಸಿಕೊಳ್ಳಲಿದ್ದಾರೆ.

ಕ್ರೀಡಾ ಜ್ಯೋತಿ ಸ್ವೀಕಾರವನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಸಿ.ಎಸ್.ಷಡಕ್ಷರಿ ಅವರು ಸ್ವೀಕರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ.ಕೆ.ಸುಧಾಕರ್, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ರವಿ, ಪುಟ್ಟಣ್ಣ, ಎನ್.ನಾಗರಾಜು(ಎಂ.ಟಿ.ಬಿ), ರಾಮೋಜಿ ಗೌಡ, ದೊಡ್ಡಬಳ್ಳಾಪುರ ವಿಧಾನಸಭಾ ಶಾಸಕ ಧೀರಜ್ ಮುನಿರಾಜು, ನೆಲಮಂಗಲ ವಿಧಾನಸಭಾ ಶಾಸಕರಾದ ಎನ್.ಶ್ರೀನಿವಾಸ್. ಬೆಂಗಳೂರು ಗ್ರಾಮಾಂತರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಬಿ.ರಾಜಣ್ಣ, ದೇವನಹಳ್ಳಿಯ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶಾಭಿವೃದ್ಧಿ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ವಿ. ಶಾಂತ ಕುಮಾರ್, ದೇವನಹಳ್ಳಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲ್ಲೂಕು ಅಧ್ಯಕ್ಷರಾದ ಸಿ. ಜಗನ್ನಾಥ್, ಆರ್ಥಿಕ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಪಿ.ಸಿ.ಜಾಫರ್ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೆ. ಹನುಮಂತರಾಯಪ್ಪ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷರು ಹಾಗೂ ದೇವನಹಳ್ಳಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಿ.ಎಸ್. ಶ್ರೀನಾಥಗೌಡ ಹಾಗೂ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ನಾಮ ನಿರ್ದೇಶಿತ ಸದಸ್ಯರು, ಮಾಧ್ಯಮ ಮತ್ತು ಪತ್ರಿಕಾ ಪ್ರತಿನಿಧಿಗಳು, ಜಿಲ್ಲೆಯ ರಾಜ್ಯ ಸರ್ಕಾರಿ ನೌಕರರ ಸಂಘದ ಎಲ್ಲಾ ಪದಾಧಿಕಾರಿಗಳು, ಎಲ್ಲಾ ವೃಂದದ ಸಂಘಗಳ ಪದಾಧಿಕಾರಿಗಳು ಹಾಗೂ ಮುಖಂಡರುಗಳು ಮತ್ತು ಸಾರ್ವಜನಿಕರು ಉಪಸ್ಥಿತರಿರುತ್ತಾರೆ.

ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳಾದ ಎ.ಬಿ.ಬಸವರಾಜು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಎನ್.ಅನುರಾಧ, ಜಿಲ್ಲಾ ಪೊಲೀಸ್ ಅಧೀಕ್ಷಕರು ಚಂದ್ರಕಾಂತ್ ಎಂ.ವಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಶ್ರೀಮತಿ ಗೀತಾ ಆರ್, ದೊಡ್ಡಬಳ್ಳಾಪುರ ತಾಲ್ಲೂಕು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಅಧ್ಯಕ್ಷರಾದ ರಾಜಶೇಖರ್ ಎಂ.ಎಸ್, ನೆಲಮಂಗಲ ತಾಲ್ಲೂಕು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಅಧ್ಯಕ್ಷರಾದ ನಾಗೇಶ್ ಕೆ.ಎನ್, ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಬೈರೇಗೌಡ ಬಿ.ಪಿ, ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಖಜಾಂಚಿ ಉಮಾಶಂಕರ್ ಎಲ್.ಎಂ, ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ನಾರಾಯಣ ಗೌಡ, ಗ್ರಾಮಾಂತರ ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಾರ್ಯಾಧ್ಯಕ್ಷರಾದ ಆದರ್ಶ ಬಿ ಉಪಸ್ಥಿತರಿರುವರು

# ನಟ ಮಯೂರ್ ಪಟೇಲ್ ವಿರುದ್ಧ FIR



**ಬೆಂಗಳೂರು:** ನಗರದ ಬ್ಯುಸಿ ರಸ್ತೆಯೊಂದರಲ್ಲಿ ಕುಡಿದು ವಾಹನ ಚಲಾಯಿಸಿದ ಆರೋಪದಡಿ ಸ್ಯಾಂಡಲ್‌ವುಡ್ ನಟ ಮಯೂರ್ ಪಟೇಲ್ ವಿರುದ್ಧ ಎಫ್‌ಐಆರ್ ದಾಖಲಾಗಿರುವ ಘಟನೆ ಸಂಚಲನ ಮೂಡಿಸಿದೆ. ಓಲ್ಡ್ ಏರ್ಪೋರ್ಟ್ ರಸ್ತೆಯ ಕಮಾಂಡೊ ಆಸ್ಪತ್ರೆ ಸಿಗ್ನಲ್ ಬಳಿ ಕಳೆದ ರಾತ್ರಿ ಸುಮಾರು 10 ಗಂಟೆ ವೇಳೆಗೆ ಈ ಅಪಘಾತ ಸಂಭವಿಸಿದ್ದು, ಸರಣಿ ಡಿಕ್ಕಿಯಿಂದ ನಾಲ್ಕು ಕಾರುಗಳು ಹಾನಿಗೊಳಗಾಗಿವೆ.

ಮಾಹಿತಿ ಪ್ರಕಾರ, ಸಿಗ್ನಲ್‌ನಲ್ಲಿ ವಾಹನಗಳು ನಿಂತಿದ್ದಾಗ ಹಿಂಬದಿಯಿಂದ ವೇಗವಾಗಿ ಬಂದ ಫಾರ್ಚೂನರ್ ಕಾರು ನಿಯಂತ್ರಣ ಕಳೆದುಕೊಂಡು ಮುಂದಿದ್ದ ಕಾರುಗಳಿಗೆ ಡಿಕ್ಕಿ ಹೊಡೆದಿದೆ. ಮೊದಲ ಡಿಕ್ಕಿಯ ನಂತರ ಒಂದಕ್ಕೊಂದು ವಾಹನಗಳು ಸರಪಳಿಯಾಗಿ ಡಿಕ್ಕಿಯಾಗುತ್ತಾ ಸರಣಿ ಅಪಘಾತ ಸಂಭವಿಸಿದೆ. ಕ್ಷಣಾರ್ಧದಲ್ಲಿ ಸ್ಥಳದಲ್ಲಿ ಗೊಂದಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಪ್ರಯಾಣಿಕರು ಬೆಚ್ಚಿಬಿದ್ದಿದ್ದಾರೆ.

ಅಪಘಾತಕ್ಕೀಡಾದ ವಾಹನಗಳಲ್ಲಿ ಎರಡು ಸ್ವಿಫ್ಟ್ ಡಿಜೈರ್ ಕಾರುಗಳು, ಒಂದು ಸರ್ಕಾರಿ ವಾಹನ ಹಾಗೂ ಮತ್ತೊಂದು ಖಾಸಗಿ ಕಾರು ಸೇರಿವೆ. ಕೆಲವು ವಾಹನಗಳ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದ್ದು, ರಸ್ತೆ ಮಧ್ಯೆ ವಾಹನಗಳು ನಿಂತಿದ್ದರಿಂದ ಸಂಚಾರವೂ ಕೆಲ ಕಾಲ ಅಸ್ತವ್ಯಸ್ತಗೊಂಡಿತ್ತು. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸದಿದ್ದರೂ, ಚಾಲಕರು ಮತ್ತು ಪ್ರಯಾಣಿಕರು ಆತಂಕಕ್ಕೆ ಒಳಗಾಗಿದ್ದಾರೆ.

ಅಪಘಾತದ ವೇಳೆ ನಟ ಮಯೂರ್ ಪಟೇಲ್ ತಾನೇ ಕಾರು ಚಲಾಯಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ವೇಗ ಮತ್ತು ಅಜಾಗರೂಕ ಚಾಲನೆಯೇ ಅಪಘಾತಕ್ಕೆ ಕಾರಣ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ತಕ್ಷಣವೇ ಹಲಸೂರು ಸಂಚಾರ ಪೊಲೀಸರು ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು.

ನಂತರ ನಟನನ್ನು ಠಾಣೆಗೆ ಕರೆತಂದು ಡ್ರಂಕ್ ಅಂಡ್ ಡ್ರೈವ್ ಪರೀಕ್ಷೆ ನಡೆಸಲಾಗಿದ್ದು, ಪರೀಕ್ಷೆಯಲ್ಲಿ ಮದ್ಯಪಾನ ಮಾಡಿರುವುದು ಪಾಸಿಟಿವ್ ಬಂದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಜಖಂಗೊಂಡ ಕಾರುಗಳ ಚಾಲಕರಲ್ಲಿ ಶ್ರೀನಿವಾಸ್ ಎಂಬವರು ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಾಗಿದೆ.

ಕುಡಿದು ವಾಹನ ಚಲಾಯಿಸಿ ಅಪಘಾತ ಎಸಗಿದ ಆರೋಪದಡಿ ಹಲಸೂರು ಸಂಚಾರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸ ಲಾಗಿದ್ದು, ನಟನ ಫಾರ್ಚೂನರ್ ಕಾರನ್ನು ಪೊಲೀಸರು ವಶಕ್ಕೆ ಪಡೆದು ಸೀಜ್ ಮಾಡಿದ್ದಾರೆ. ಅಪಘಾತದ ಸಿಸಿಟಿವಿ ದೃಶ್ಯಗಳು, ಸಾಕ್ಷಿಗಳ ಹೇಳಿಕೆಗಳು ಹಾಗೂ ತಾಂತ್ರಿಕ ಮಾಹಿತಿಯನ್ನು ಆಧರಿಸಿ ಪೊಲೀಸರು ಮುಂದಿನ ತನಿಖೆ ನಡೆಸುತ್ತಿದ್ದಾರೆ.

ಈ ಘಟನೆ ಮತ್ತೆ ಕುಡಿದು ವಾಹನ ಚಲಾಯಿಸುವ ಅಪಾಯಗಳ ಕುರಿತು ಸಾರ್ವಜನಿಕ ಚರ್ಚೆಗೆ ಕಾರಣವಾಗಿದೆ. ನಗರದಲ್ಲಿ ಡ್ರಂಕ್ ಅಂಡ್ ಡ್ರೈವ್ ಪ್ರಕರಣಗಳನ್ನು ತಡೆಯಲು ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿರುವ ನಡುವೆಯೇ ಇಂತಹ ಘಟನೆಗಳು ಮುಂದುವರಿಯುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

# ಭಾರತದ ಸಂವಿಧಾನದ ಮೌಲ್ಯಗಳು ಹಾಗೂ ದಿನನಿತ್ಯದ ಬದುಕಿನಲ್ಲಿ ಅದರ ಆಚರಣೆಯ ಸ್ವರೂಪ- ಭಾಗ 1

ಭಾರತದ ಸಂವಿಧಾನವು ಕೇವಲ ಕಾನೂನುಗಳ ಸಂಗ್ರಹವಲ್ಲ; ಅದು ಭಾರತದ ಸಮಾಜದ ನೈತಿಕ ದಿಕ್ಕು, ಮಾನವೀಯ ಕನಸು ಮತ್ತು ಪ್ರಜಾಪ್ರಭುತ್ವದ ಆತ್ಮವನ್ನು ಪ್ರತಿಬಿಂಬಿಸುವ ಆಲೋಚನೆ. ಸ್ವಾತಂತ್ರ್ಯ, ಸಮಾನತೆ, ನ್ಯಾಯ, ಬಂಧುತ್ವ ಮತ್ತು ಜಾತ್ಯಾತೀತತೆ( ಸೆಕ್ಯೂಲರ್/ ಬಹುತ್ವ ) ಎಂಬ ಮೂಲಭೂತ ಮೌಲ್ಯಗಳ ಮೇಲೆ ನಿಂತಿರುವ ಈ ಸಂವಿಧಾನವು, ದಿನನಿತ್ಯದ ಬದುಕಿನಲ್ಲಿ ನಾವು ಹೇಗೆ ಬದುಕಬೇಕು, ನಮ್ಮ ಮೌಲ್ಯಗಳು ಏನಾಗಿರಬೇಕು ಎಂಬುದಕ್ಕೂ ದಿಕ್ಕು ನೀಡುತ್ತದೆ.

**1. ಸ್ವಾತಂತ್ರ್ಯ**:ಸಂವಿಧಾನವು ವ್ಯಕ್ತಿಯ ಅಭಿವ್ಯಕ್ತಿ, ನಂಬಿಕೆ, ಆಲೋಚನೆ ಮತ್ತು ಜೀವನ ಶೈಲಿಯ ಸ್ವಾತಂತ್ರ್ಯವನ್ನು ಒತ್ತಿಹೇಳುತ್ತದೆ.

ದಿನನಿತ್ಯದ ಆಚರಣೆಯಲ್ಲಿ ಬೇರೆ ಅಭಿಪ್ರಾಯಗಳನ್ನೂ ಗೌರವದಿಂದ ಕೇಳುವುದು, ಸಾಮಾಜಿಕ ಮಾಧ್ಯಮಗಳಲ್ಲಿ ದ್ವೇಷವಲ್ಲ, ಜವಾಬ್ದಾರಿಯುತ ಮಾತುಗಳನ್ನು ಬಳಸುವುದು, ಮಹಿಳೆಯರು, ಯುವಜನರು, ಧಾರ್ಮಿಕ ಹಾಗು ಲೈಂಗಿಕ ಅಲ್ಪಸಂಖ್ಯಾತರು, ಮುಂತಾದವರ ಸ್ವತಂತ್ರ ಆಯ್ಕೆಗಳಿಗೆ ಗೌರವ ನೀಡುವುದು... ಹೀಗೆ ಇದನ್ನು ವಿವರವಾಗಿ ನೋಡುವುದಾದರೆ ದಿನನಿತ್ಯದ ಬದುಕಿನಲ್ಲಿ ಸ್ವಾತಂತ್ರ್ಯ ನಡವಳಿಕೆಯಲ್ಲಿ ಹೇಗೆ ವ್ಯಕ್ತವಾಗುತ್ತದೆ ಎಂಬುದನ್ನು ಕೆಲವು ಸರಳ ಆದರೆ ಸ್ಪಷ್ಟ ಉದಾಹರಣೆಗಳ ಮೂಲಕ ಅರ್ಥಮಾಡಿಕೊಳ್ಳಬಹುದು. ಉದಾಹರಣೆಗೆ, ಕಚೇರಿ ಸಭೆ ಅಥವಾ ಕಾಲೇಜು ತರಗತಿಯಲ್ಲಿ ಯಾರಾದರೂ ನಮ್ಮ ಅಭಿಪ್ರಾಯಕ್ಕೆ ವಿರುದ್ಧವಾದ ವಿಚಾರವನ್ನು ಮುಂದಿಟ್ಟಾಗ, ಅವರನ್ನು ಮಧ್ಯೆ ತಡೆದು ಮಾತನಾಡದಿರುವುದು, "ನೀವು ತಪ್ಪು" ಎಂದು ಕಟುವಾಗಿ ಹೇಳುವುದಕ್ಕಿಂತ "ನಿಮ್ಮ ದೃಷ್ಟಿಕೋನ ಬೇರೆ ಇದೆ, ನಾನು ನನ್ನದನ್ನು ಹಂಚಿಕೊಳ್ಳುತ್ತೇನೆ" ಎಂದು ಪ್ರತಿಕ್ರಿಯಿಸುವುದು ಸ್ವಾತಂತ್ರ್ಯದ ಗೌರವ. ಸಾರ್ವಜನಿಕ ಚರ್ಚೆಗಳಲ್ಲಿ ಅಥವಾ ಗ್ರಾಮಸಭೆಗಳಲ್ಲಿ ಮಹಿಳೆ, ದಲಿತ ಅಥವಾ ಅಲ್ಪಸಂಖ್ಯಾತ ವ್ಯಕ್ತಿ ಮಾತನಾಡುವಾಗ ಅವರ ಧ್ವನಿಯನ್ನು ಕಡೆಗಣಿಸದೇ ಗಮನದಿಂದ ಕೇಳುವುದು ಕೂಡ "ಒಪ್ಪದೆ ಇರಬಹುದು, ಆದರೆ ಕೇಳುತ್ತೇನೆ" ಎಂಬ ಸಂವಿಧಾನಾತ್ಮಕ ಮನಸ್ಥಿತಿಯ ಉದಾಹರಣೆ.

ಕುಟುಂಬದ ಮಟ್ಟದಲ್ಲೂ ಸ್ವಾತಂತ್ರ್ಯದ ಆಚರಣೆ ಬಹಳ ಮುಖ್ಯ. ಉದಾಹರಣೆಗೆ, ಮಗುವೊಂದು ವಿಜ್ಞಾನಕ್ಕಿಂತ ಕಲೆ ಅಥವಾ ಕ್ರೀಡೆಗೆ ಆಸಕ್ತಿ ತೋರಿಸಿದಾಗ "ಇದರಿಂದ ಜೀವನ ನಡೆಯುವುದಿಲ್ಲ" ಎಂದು ತಕ್ಷಣ ತಿರಸ್ಕರಿಸುವ ಬದಲು, ಆ ಆಸಕ್ತಿಯನ್ನು ಅರ್ಥಮಾಡಿಕೊಳ್ಳಲು ಪ್ರಯತ್ನಿಸುವುದು ಸ್ವಾತಂತ್ರ್ಯದ ಅಭ್ಯಾಸ. ಹೆಣ್ಣುಮಗು ಉನ್ನತ ಶಿಕ್ಷಣ ಅಥವಾ ಉದ್ಯೋಗಕ್ಕಾಗಿ ಊರಿನಿಂದ ಹೊರಗೆ ಹೋಗಲು ಬಯಸಿದರೆ, ಭಯ ಅಥವಾ ಸಂಪ್ರದಾಯದ ಹೆಸರಿನಲ್ಲಿ ತಡೆಯದೇ, ಅವಳ ನಿರ್ಧಾರವನ್ನು ಗೌರವಿಸುವುದು ಕೂಡ ಅದೇ ಮೌಲ್ಯದ ಭಾಗ. ಮಕ್ಕಳ ಮಾತನ್ನು "ನೀನು ಇನ್ನೂ ಚಿಕ್ಕವನು" ಎಂದು ನಿರ್ಲಕ್ಷಿಸದೇ, ಅವರ ಅಭಿಪ್ರಾಯವನ್ನು ಗಂಭೀರವಾಗಿ ತೆಗೆದುಕೊಳ್ಳುವ ಮನೋಭಾವವೇ ಸ್ವಾತಂತ್ರ್ಯವನ್ನು ಮನೆಮಾತಾಗಿಸುತ್ತದೆ.

ಸಾಮಾಜಿಕ ಮಾಧ್ಯಮಗಳಲ್ಲಿ ಸ್ವಾತಂತ್ರ್ಯ ಜವಾಬ್ದಾರಿಯೊಂದಿಗೆ ಜೋಡಿಸಬೇಕು. ಉದಾಹರಣೆಗೆ, ರಾಜಕೀಯ ಅಥವಾ ಧಾರ್ಮಿಕ ವಿಷಯಗಳಲ್ಲಿ ಭಿನ್ನಾಭಿಪ್ರಾಯ ವ್ಯಕ್ತಪಡಿಸುವಾಗ ವ್ಯಕ್ತಿಯ ಜಾತಿ, ಲಿಂಗ ಅಥವಾ ಹಿನ್ನೆಲೆಯನ್ನು ಗುರಿಯಾಗಿಸಿ ಅವಮಾನಿಸುವ ಬದಲು, ಆ ವಿಚಾರದ ತರ್ಕದ ಮೇಲೆ ಚರ್ಚೆ ನಡೆಸುವುದು ಪ್ರೌಢ ಸ್ವಾತಂತ್ರ್ಯದ ಲಕ್ಷಣ. ವಾಟ್ಸಾಪ್ ಅಥವಾ ಫೇಸ್‌ಬುಕ್‌ನಲ್ಲಿ ಬಂದ ಸಂದೇಶವನ್ನು ಪರಿಶೀಲಿಸದೇ ಹಂಚಿಕೊಳ್ಳುವುದು ದ್ವೇಷ ಅಥವಾ ಭಯವನ್ನು ಹರಡಬಹುದು; ಅದನ್ನು ತಡೆಯುವುದು ಕೂಡ ಸ್ವಾತಂತ್ರ್ಯದ ಜವಾಬ್ದಾರಿ. ಈ ರೀತಿಯಾಗಿ ನಿತ್ಯದ ಮಾತು, ನಡೆ ಮತ್ತು ಆಯ್ಕೆಗಳಲ್ಲಿ ಪರಸ್ಪರ ಗೌರವವನ್ನು ಕಾಪಾಡಿಕೊಳ್ಳುವುದರಲ್ಲೇ ಸ್ವಾತಂತ್ರ್ಯ ಕಾನೂನಿನ ತತ್ವವಲ್ಲದೆ, ಬದುಕಿನ ಜೀವಂತ ಮೌಲ್ಯವಾಗಿ ರೂಪುಗೊಳ್ಳುತ್ತದೆ.

ಮಹಿಳೆಯೊಬ್ಬರು ತಮ್ಮ ಇಷ್ಟದ ಉಡುಗೆ ಧರಿಸಿದಾಗ ಅಥವಾ ರಾತ್ರಿ ಕೆಲಸ ಮಾಡುವ ಉದ್ಯೋಗ ಆಯ್ಕೆ ಮಾಡಿಕೊಂಡಾಗ, "ಇದು ಸರಿಯಲ್ಲ" ಎಂದು ಸಮಾಜ ಪ್ರಶ್ನಿಸುವ ಬದಲು ಅದು ಅವರ ವೈಯಕ್ತಿಕ ನಿರ್ಧಾರ ಎಂದು ಒಪ್ಪಿಕೊಳ್ಳುವುದು ಸ್ವಾತಂತ್ರ್ಯದ ಗೌರವ. ಅದೇ ರೀತಿ, ಮಹಿಳೆಯೊಬ್ಬರು ವಿವಾಹವಾಗದೇ ಬದುಕಲು ಅಥವಾ ಅಂತರಜಾತಿ/ ಅಂತರಧರ್ಮ ವಿವಾಹ ಆಯ್ಕೆ ಮಾಡಿಕೊಂಡಾಗ, ಕುಟುಂಬ ಮತ್ತು ಸಮಾಜವು ಅನುಮಾನ, ಗಾಳಿ ಮಾತು ಅಥವಾ ಒತ್ತಡ ತರುವುದನ್ನು ಬಿಟ್ಟು ಅವರ ಆಯ್ಕೆಯನ್ನು ಮಾನ್ಯಗೊಳಿಸುವುದು ಸಂವಿಧಾನಾತ್ಮಕ ಮೌಲ್ಯವನ್ನು ಬದುಕಿನಲ್ಲಿ ಅಳವಡಿಸಿದಂತಾಗುತ್ತದೆ.

ಯುವಜನರ ವಿಚಾರದಲ್ಲೂ ಸ್ವಾತಂತ್ರ್ಯ ಕೇಳುವ ಮತ್ತು ಅವಕಾಶ ನೀಡುವ ಮನಸ್ಥಿತಿಯಲ್ಲಿ ಕಾಣಬೇಕು. ಕಾಲೇಜು ವಿದ್ಯಾರ್ಥಿಗಳು ಶಿಕ್ಷಣ ನೀತಿ, ಉದ್ಯೋಗ ಕೊರತೆ ಅಥವಾ ಸಾಮಾಜಿಕ ಅನ್ಯಾಯಗಳ ಬಗ್ಗೆ ಮಾತನಾಡುವಾಗ "ನಿಮಗೆ ಇನ್ನೂ ಅನುಭವವಿಲ್ಲ" ಎಂದು ಸುಮ್ಮನಾಗಿಸುವ ಬದಲು, ಅವರ ಅಭಿಪ್ರಾಯವನ್ನು ಕೇಳಿ ಸಂವಾದಕ್ಕೆ ಅವಕಾಶ ನೀಡುವುದು ಅಗತ್ಯ. ಪ್ರತಿಭಟನೆ, ಬರವಣಿಗೆ ಅಥವಾ ಕಲೆಯ ಮೂಲಕ ಯುವಜನರು ತಮ್ಮ ನಿಲುವು ವ್ಯಕ್ತಪಡಿಸಿದಾಗ ಅದನ್ನು ಅಪಾಯ ಅಥವಾ ಅಶಿಸ್ತು ಎಂದು ತಕ್ಷಣ ನಿಲುವು ತೆಗೆದುಕೊಳ್ಳುವುದಕ್ಕಿಂತ, ಅದು ಅವರ ನಾಗರಿಕ ಹಕ್ಕು ಎಂಬುದನ್ನು ಗುರುತಿಸುವುದು ಸ್ವಾತಂತ್ರ್ಯದ ಪ್ರಾಯೋಗಿಕ ರೂಪವಾಗಿದೆ. ಈ ರೀತಿಯ ಗೌರವದಿಂದಲೇ ಹೊಸ ಆಲೋಚನೆಗಳು ಮತ್ತು ಸಾಮಾಜಿಕ ಬದಲಾವಣೆ ಸಾಧ್ಯವಾಗುತ್ತದೆ.

ಅದೇ ರೀತಿಯಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಸ್ವಾತಂತ್ರ್ಯವನ್ನು ಸಹಜವಾಗಿ ಒಪ್ಪಿಕೊಳ್ಳುವುದು ಅತ್ಯಂತ ಮುಖ್ಯ. ಉದಾಹರಣೆಗೆ, ಅವರು ತಮ್ಮ ಭಾಷೆಯಲ್ಲಿ ಮಾತನಾಡುವುದು, ಧಾರ್ಮಿಕ ಗುರುತುಗಳೊಂದಿಗೆ ಸಾರ್ವಜನಿಕ ಸ್ಥಳಗಳಲ್ಲಿ ಕಾಣಿಸಿಕೊಳ್ಳುವುದು ಇವರ ಹಕ್ಕುಗಳೇ ಹೊರತು ಅನುಗ್ರಹವಲ್ಲ. ಇವುಗಳನ್ನು "ಮುಖ್ಯವಾಹಿನಿಗೆ ಹೊಂದಿಕೆಯಾಗಬೇಕು" ಎಂಬ ಹೆಸರಿನಲ್ಲಿ ತಡೆಯುವುದು ಸ್ವಾತಂತ್ರ್ಯಕ್ಕೆ ವಿರುದ್ಧ. ಇಂತಹ ಸಣ್ಣ-ಸಣ್ಣ ದಿನನಿತ್ಯದ ಆಚರಣೆಗಳ ಮೂಲಕವೇ ಸ್ವಾತಂತ್ರ್ಯ ಕೇವಲ ಸಂವಿಧಾನದ ಪುಟಗಳಲ್ಲಿ ಸೀಮಿತವಾಗದೇ, ಮಾನವೀಯ ಸಂಬಂಧಗಳಲ್ಲಿ ಜೀವಂತ ಮೌಲ್ಯವಾಗಿ ರೂಪಾಂತರಗೊಳ್ಳುತ್ತದೆ.

ಇದೇ ಚೌಕಟ್ಟಿನಲ್ಲಿ ಲೈಂಗಿಕ ಅಲ್ಪಸಂಖ್ಯಾತರ (LGBTQIA+) ಸಂವಿಧಾನಾತ್ಮಕ ಸ್ವಾತಂತ್ರ್ಯವನ್ನು ಸೇರಿಸಿದಾಗ ಸ್ವಾತಂತ್ರ್ಯದ ಅರ್ಥ ಇನ್ನಷ್ಟು ಸಮಗ್ರವಾಗುತ್ತದೆ. ಲೈಂಗಿಕ ಅಲ್ಪಸಂಖ್ಯಾತ ವ್ಯಕ್ತಿಯೊಬ್ಬರು ತಮ್ಮ ಲೈಂಗಿಕ ಗುರುತು ಅಥವಾ ಲಿಂಗ ಗುರುತನ್ನು ಬಹಿರಂಗವಾಗಿ ವ್ಯಕ್ತಪಡಿಸಿದಾಗ, ಅದನ್ನು "ಅಸ್ವಾಭಾವಿಕ" ಅಥವಾ "ಫ್ಯಾಷನ್" ಎಂದು ತಳ್ಳಿಹಾಕದೇ, ಅದು ಅವರ ಅಸ್ತಿತ್ವದ ಭಾಗ ಎಂದು ಗೌರವಿಸುವುದು ಸಂವಿಧಾನಾತ್ಮಕ ಸ್ವಾತಂತ್ರ್ಯದ ಪ್ರಮುಖ ಉದಾಹರಣೆ. ಉದಾಹರಣೆಗೆ, ಟ್ರಾನ್ಸ್‌ಜೆಂಡರ್ ವ್ಯಕ್ತಿಯೊಬ್ಬರು ತಮ್ಮ ಆಯ್ಕೆಯ ಹೆಸರು, ಉಡುಗೆ ಅಥವಾ ಶೌಚಾಲಯ ಬಳಕೆಯನ್ನು ಅನುಸರಿಸಿದಾಗ ಅವರನ್ನು ಹಾಸ್ಯ, ಅವಮಾನ ಅಥವಾ ಹಿಂಸೆಗೆ ಒಳಪಡಿಸದೇ, ಸಹಜವಾಗಿ ಒಪ್ಪಿಕೊಳ್ಳುವುದು ಸ್ವಾತಂತ್ರ್ಯ ಬದುಕಿನಲ್ಲಿ ಕಾರ್ಯರೂಪಕ್ಕೆ ಬಂದ ಕ್ಷಣವಾಗುತ್ತದೆ.

ಅದೇ ರೀತಿಯಲ್ಲಿ ಉದ್ಯೋಗ, ಶಿಕ್ಷಣ ಮತ್ತು ಸಾರ್ವಜನಿಕ ಜೀವನದಲ್ಲಿ ಲೈಂಗಿಕ ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ಕಲ್ಪಿಸುವುದು ಕೂಡ ಸ್ವಾತಂತ್ರ್ಯದ ಅಭ್ಯಾಸವೇ. ಉದಾಹರಣೆಗೆ, ಕಚೇರಿ ಅಥವಾ ಕಾಲೇಜಿನಲ್ಲಿ ಪ್ರೀತಿಯ ಕುರಿತು ಮಾತನಾಡುವವರನ್ನು "ಇದನ್ನು ಸಾರ್ವಜನಿಕವಾಗಿ ಹೇಳಬೇಡಿ" ಎಂದು ಮೌನಗೊಳಿಸುವುದು ಸ್ವಾತಂತ್ರ್ಯಕ್ಕೆ ವಿರುದ್ಧ. ಕುಟುಂಬದೊಳಗೆ ಮಗ ಅಥವಾ ಮಗಳು ತಮ್ಮ ಲೈಂಗಿಕ ಗುರುತನ್ನು ಹಂಚಿಕೊಂಡಾಗ, ಅದನ್ನು "ನಮ್ಮ ಕುಟುಂಬಕ್ಕೆ ಅವಮಾನ" ಎಂದು ಕಾಣದೇ, ಕೇಳುವ ಮತ್ತು ಅರ್ಥಮಾಡಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳುವುದು ಸಂವಿಧಾನದ ಆತ್ಮಕ್ಕೆ ಹೊಂದಿಕೊಳ್ಳುತ್ತದೆ. ಇಂತಹ ಸಂದರ್ಭಗಳಲ್ಲಿ ಮೌನವಾಗಿ ಬೆಂಬಲಿಸುವುದೇ ಕೆಲವೊಮ್ಮೆ ಅತ್ಯಂತ ಶಕ್ತಿಶಾಲಿ ಸ್ವಾತಂತ್ರ್ಯದ ಆಚರಣೆ ಆಗುತ್ತದೆ.

ಈ ರೀತಿಯಾಗಿ ಮಹಿಳೆಯರು, ಯುವಕರು, ಅಲ್ಪಸಂಖ್ಯಾತರು ಮತ್ತು ಲೈಂಗಿಕ ಅಲ್ಪಸಂಖ್ಯಾತರು ತಮ್ಮದೇ ಆದ ಬದುಕಿನ ಆಯ್ಕೆಗಳನ್ನು ಭಯವಿಲ್ಲದೆ ಮಾಡುವ ಅವಕಾಶ ದೊರಕಿದಾಗಲೇ ಸಂವಿಧಾನಾತ್ಮಕ ಸ್ವಾತಂತ್ರ್ಯ ಕಾಗದದ ಹಕ್ಕಾಗಿರದೆ, ದಿನನಿತ್ಯದ ಮಾನವೀಯ ಸಂಬಂಧಗಳಲ್ಲಿ ಜೀವಂತ ಮೌಲ್ಯವಾಗಿ ರೂಪುಗೊಳ್ಳುತ್ತದೆ. ಪರಸ್ಪರ ಗೌರವ, ಕೇಳುವ ಮನಸ್ಸು ಮತ್ತು ಭಿನ್ನತೆಯನ್ನು ಸಹಜವಾಗಿ ಒಪ್ಪಿಕೊಳ್ಳುವ ನಡವಳಿಕೆಯಲ್ಲೇ ಸ್ವಾತಂತ್ರ್ಯದ ನಿಜವಾದ ಅರ್ಥ ಅಡಗಿದೆ.



**ಡಾ. ಮುರಳಿ ಮೋಹನ್ ಕಾಟಿ**

**ಲೇಖಕರು**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.